Received on 25/09/2020
WUP

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ:ಕಾಶಿಇ/ಶೈವಿ/48/ಭಾ.ರೆ.ಕ್ರಾ.ಸಂ./2020-21 ದಿನಾಂಕ: 22.09.2020.

# ಸುತ್ತೋಲೆ

ವಿಷಯ: ಪದವಿ ಕಾಲೇಜುಗಳಲ್ಲಿನ ರೆಡ್‌ಕ್ರಾಸ್ ಘಟಕದ ಸ್ಥಳೀಯ ಪರಿಶೀಲನಾ ಸಮಿತಿಯಲ್ಲಿ (Local Inspection Committee) ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯನ್ನು ಒಂದು ಭಾಗವಾಗಿ ಗುರುತಿಸುವ ಬಗ್ಗೆ.

ಉಲ್ಲೇಖ: ಪ್ರಧಾನ ಕಾರ್ಯದರ್ಶಿಗಳು, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ ಬೆಂಗಳೂರು ಇವರ ಪತ್ರ ಸಂಖ್ಯೆ: ಐಆರ್‌ಸಿಎಸ್/ ವೈಆರ್‌ಸಿ/ 206/ 2020-21 ದಿನಾಂಕ:30.06.2020.

***********

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯು ಅಂತರರಾಷ್ಟ್ರೀಯ ಮಾನವೀಯ ಸೇವಾ ಸಂಸ್ಥೆಯಾಗಿದ್ದು, ಈ ಸಂಸ್ಥೆಯ ಅಧ್ಯಕ್ಷರು ಗೌರವಾನ್ವಿತ ರಾಷ್ಟ್ರಪತಿಗಳಾಗಿರುತ್ತಾರೆ. ಕರ್ನಾಟಕದಲ್ಲಿ 1921 ರಲ್ಲಿ ಅಸ್ತಿತ್ವಕ್ಕೆ ಬಂದಿರುವ ಸಂಸ್ಥೆಗೆ ಕರ್ನಾಟಕ ರಾಜ್ಯದ ಘನತೆವೆತ್ತ ರಾಜ್ಯಪಾಲರು ಅಧ್ಯಕ್ಷರಾಗಿದ್ದು, ಇವರುಗಳ ಮಾರ್ಗದರ್ಶನದಲ್ಲಿ ರೆಡ್ ಕ್ರಾಸ್ ಸಂಸ್ಥೆಯು ಹಲವಾರು ಮಾನವೀಯ ಕಾರ್ಯಕ್ರಮಗಳನ್ನು ನಡೆಸುತ್ತಾ ಬಂದಿರುತ್ತದೆ. ಯುದ್ಧ ಸಮಯದಲ್ಲಿ ಗಾಯಗೊಂಡ ಸೈನಿಕರಿಗೆ, ನೈಸರ್ಗಿಕ ವಿಪತ್ತು, ಸಂಭವಿಸಿದಾಗ ಪರಿಹಾರ ಕಾರ್ಯ, ಆರೋಗ್ಯದ ಬಗ್ಗೆ ಅರಿವು ಮತ್ತು ಶಿಕ್ಷಣ ರಕ್ತನಿಧಿಗಳು, ಅಂಗವಿಕಲರಿಗೆ ಸಾಧನ ಸಲಕರಣೆಗಳ ವಿತರಣೆ, ಪ್ರಥಮ ಚಿಕಿತ್ಸೆ ಯುದ್ಧ, ಪ್ರಕೃತಿ ವಿಕೋಪಗಳಿಂದಾಗಿ ಚದುರಿಹೋಗಿರುವ ಕುಟುಂಬಗಳ ಸದಸ್ಯರನ್ನು ಪತ್ತೆ ಮಾಡಿ ಒಂದು ಗೂಡಿಸುವುದು. ಶಾಲಾ ಕಾಲೇಜುಗಳಲ್ಲಿ ಕಿರಿಯ / ಯುವ ರೆಡ್ ಕ್ರಾಸ್ ಚಟುವಟಿಕೆಗಳೊಂದಿಗೆ ರೆಡ್ ಕ್ರಾಸ್ ಸಂಸ್ಥೆಯ ಪ್ರಮುಖ ಕಾರ್ಯ ಚಟುವಟಿಕೆಗಳನ್ನು ಯಶಸ್ವಿಯಾಗಿ ನಿರ್ವಹಿಸುತ್ತಾ ಬಂದಿರುತ್ತದೆ. ಆದುದರಿಂದ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯನ್ನು ಪದವಿ ಕಾಲೇಜುಗಳಲ್ಲಿ ಸ್ಥಳೀಯ ಪರಿಶೀಲನಾ ಸಮಿತಿಯಲ್ಲಿ ಒಂದು ಭಾಗವಾಗಿ ಗುರುತಿಸುವಂತೆ ಕೋರಿರುತ್ತಾರೆ.

ಈ ಹಿನ್ನಲೆಯಲ್ಲಿ ಸದರಿ ಸಂಸ್ಥೆಯ ಕೋರಿಕೆಯನ್ನು ಪರಿಗಣಿಸಿ ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಸ್ಥಳೀಯ ಪರಿಶೀಲನಾ ಸಮಿತಿಯಲ್ಲಿ **(Local Inspection Committee)** ಎನ್ ಎಸ್ ಎಸ್ ಮತ್ತು ಎನ್ ಸಿ ಸಿ ತರಹವೇ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯನ್ನು ಕೂಡ ಸಮಿತಿಯ ಒಂದು ಭಾಗವನ್ನಾಗಿ ಗುರುತಿಸುವಂತೆ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿಯನ್ನು:

1. ಪ್ರಧಾನ ಕಾರ್ಯದರ್ಶಿಗಳು, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ # 26, ರೆಡ್‌ಕ್ರಾಸ್ ಭವನ, ಮೊದಲನೇ ಮಹಡಿ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು – 01.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
3. ಕಛೇರಿ ಪ್ರತಿ.